ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 727(843)
ಸದಸ್ಯರ ಹೆಸರು : ಶ್ರೀ ಶಶೀಲ್ ಜಿ ನಮೋಶಿ (ಶಿಕ್ಷಕರ ಕ್ಷೇತ್ರ)
ಉತ್ತರಿಸುವ ದಿನಾಂಕ : 20-12-2021
ಉತ್ತರಿಸುವ ಸಚಿವರು : ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು.

ಕ್ರಮ ಸಂಖ್ಯೆ	ಪ್ರಶ್ನೆ	ಉತ್ತರ
ಅ)	ಸರ್ಕಾರಿ ಪ್ರೌಢ ಶಾಲೆಯಿಂದ ಸಹ ಶಿಕ್ಷಕರುಗಳಿಗೆ ಪದವಿ ಪೂರ್ವ ಕಾಲೇಜುಗಳಿಗೆ ಬಡ್ತಿ ನೀಡಲಾಗುತ್ತಿದೆಯೇ;	ಹೌದು
ಆ)	ಪದವಿ ಪೂರ್ವ ಕಾಲೇಜುಗಳಲ್ಲಿ ಬಡ್ತಿ ನೀಡಲು ಇರುವ ನಿಯಮಾವಳಿಗಳೇನು;	ಸರ್ಕಾರದ ಅಧಿಸೂಚನೆ ಸಂಖ್ಯೆ ಇಡಿ 35 ಡಿಜಿಓ 2009, ದಿನಾಂಕ:15-05-2014ರಂತೆ ಕರ್ನಾಟಕ ಸಾಮಾನ್ಯ ಸೇವೆಗಳು(ಪದವಿ ಪೂರ್ವ ಶಿಕ್ಷಣ)(ನೇಮಕಾತಿ) ನಿಯಮಗಳು, 2013 ರಂತೆ ಸರ್ಕಾರಿ ಪದವಿ ಪೂರ್ವ ಕಾಲೇಜಿನ ವಿವಿಧ ವಿಷಯಗಳ ಶೇ.75ರಷ್ಟು ಉಪನ್ಯಾಸಕರನ್ನು ನೇರ ನೇಮಕಾತಿ ಮೂಲಕ ಹಾಗೂ ಶೇ.25ರಷ್ಟು ಉಪನ್ಯಾಸಕರ ಹುದ್ದೆಗಳನ್ನು ಸರ್ಕಾರಿ ಪ್ರೌಢಶಾಲೆಗಳ ಸಹ ಶಿಕ್ಷಕ ವೃಂದದಿಂದ ಉಪನ್ಯಾಸಕ ವೃಂದಕ್ಕೆ ಬಡ್ತಿ ಮೂಲಕ ನೇಮಕ ಮಾಡಲು ಅವಕಾಶ ಕಲ್ಪಿಸಲಾಗಿತ್ತು.
ಇ)	ಈ ಹಿಂದೆ ಎಷ್ಟು ಶಿಕ್ಷಕರುಗಳಿಗೆ ಬಡ್ತಿಯನ್ನು ಯಾವ ದಿನಾಂಕದವರೆಗೆ ನೀಡಲಾಗಿತ್ತು ;	1998 ರಿಂದ 2011 ರವರೆಗೆ ಪ್ರೌಢಶಾಲಾ ಸಹ ಶಿಕ್ಷಕರ ಹುದ್ದೆಯ ವೃಂದದಿಂದ ಉಪನ್ಯಾಸಕರ ಹುದ್ದೆಯ ವೃಂದಕ್ಕೆ 5737 ಸಹಶಿಕ್ಷಕರಿಗೆ ಪದೋನ್ನತಿ ನೀಡಲಾಗಿದೆ.
ಈ)	ಕಳೆದ ಸುಮಾರು 7-8 ವರ್ಷಗಳಿಂದ ಶಿಕ್ಷಕರುಗಳಿಗೆ ಬಡ್ತಿ ನೀಡದಿರಲು ಕಾರಣಗಳೇನು;	• ಸರ್ಕಾರದ ಅಧಿಸೂಚನೆ ಸಂಖ್ಯೆ: ಡಿಪಿಎಆರ್ 71 ಎಸ್‌ಆರ್‌ಇ 94 ದಿನಾಂಕ:27/05/1998ರಲ್ಲಿ ಶೇಕಡ 50ರಷ್ಟು ಉಪನ್ಯಾಸಕರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಮತ್ತು ಶೇಕಡ 50 ರಷ್ಟು ಪ್ರೌಢಶಾಲಾ ಸಹ ಶಿಕ್ಷಕರ ವೃಂದದಿಂದ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಉಪನ್ಯಾಸಕರ ವೃಂದಕ್ಕೆ ಬಡ್ತಿ ನೀಡಲು ಅವಕಾಶ ಕಲ್ಪಿಸಲಾಗಿತ್ತು.

		• ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 3[illegible] ಡಿಜಿಡಿ 2009 ದಿನಾಂಕ:15/05/2014 ರಲ್ಲಿ ವೃಂದ ಮತ್ತು ನೇಮಕಾತಿ ನಿಯಮಕ್ಕೆ ಪರಿಷ್ಕರಣೆ ಮಾಡಿ ಶೇಕಡ 75 ರಷ್ಟು ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಮತ್ತು ಶೇಕಡ 25ರಷ್ಟು ಹುದ್ದೆಗಳನ್ನು ಬಡ್ತಿ ಮೂಲಕ ತುಂಬಲು ಅವಕಾಶ ಕಲ್ಪಿಸಲಾಗಿದೆ.
ಉ)	ಹಳೆ ನಿಯಮಾವಳಿ ತಿದ್ದುಪಡಿಯಾಗಿ ಹೊಸ ನಿಯಮಾವಳಿ ರೂಪಿಸಿದರೂ ಕೂಡ ಬಡ್ತಿ ನೀಡದಿರಲು ಕಾರಣಗಳೇನು? (ಸಂಪೂರ್ಣ ಮಾಹಿತಿ ನೀಡುವುದು)	1998ರ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರ ಹುದ್ದೆಗಳನ್ನು ಶೇ.50ರಷ್ಟು ನೇರ ನೇಮಕಾತಿ ಮೂಲಕ ಹಾಗೂ ಶೇ.50ರಷ್ಟು ಹುದ್ದೆಗಳನ್ನು ಸರ್ಕಾರಿ ಸಹ ಶಿಕ್ಷಕ ವೃಂದದಿಂದ ಬಡ್ತಿ ಮೂಲಕ ತುಂಬಲು ಅವಕಾಶ ಕಲ್ಪಿಸಲಾಗಿತ್ತು. ಆದರೆ, 2014ರ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ, ಹಿಂದಿನ ನಿಯಮವಳಿಯನ್ನು ಶೇ.50:50ರ ಬದಲಾಗಿ, ಪ್ರಸ್ತುತ ಶೇ.75:25ಕ್ಕೆ ನಿಗದಿಗೊಳಿಸಲಾಗಿರುತ್ತದೆ. ಈ ಹಿನ್ನೆಲೆಯಲ್ಲಿ, ಬಡ್ತಿ ಕೋಟಾದಲ್ಲಿ ಈಗಾಗಲೇ ಶೇಕಡ 50ರಷ್ಟು ಪದೋನ್ನತಿ ನೀಡಿರುವುರಿಂದ 395 ಹುದ್ದೆಗಳು ಹೆಚ್ಚುವರಿಯಾಗಿರುತ್ತವೆ. ಆದ್ದರಿಂದ, ಪ್ರಸ್ತುತ ಚಾಲ್ತಿಯಲ್ಲಿರುವ ನಿಯಮಾವಳಿಗಳನ್ವಯ ಬಡ್ತಿ ಕೋಟಾದ ಹುದ್ದೆಗಳು ಲಭ್ಯವಿರುವುದಿಲ್ಲ ಆದ್ದರಿಂದ ಬಡ್ತಿ ನೀಡಲಾಗಿಲ್ಲ.

ಸಂಖ್ಯೆ: ಇಡಿ 203 ಡಿಜಿಡಬ್ಲ್ಯೂ 2021

(ಬಿ.ಸಿ. ನಾಗೇಶ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು